**Bangalore**
**Regional News**
**29.04.2025 / 18.40 hrs**
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

ಮುಖ್ಯಾಂಶಗಳು

೧. ಕಂದಾಯ ಇಲಾಖೆ ಅಧಿಕಾರಿಗಳು ಜನಸ್ನೇಹಿಯಾಗಿ ಕಾರ್ಯ ನಿರ್ವಹಿಸುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಕರೆ

೨. ನಾಳೆ ಬಸವ ಜಯಂತಿ, ಅಕ್ಷಯ ತೃತಿಯ ಹಿನ್ನೆಲೆ - ಬಾಲ್ಯ ವಿವಾಹ ತಡೆಯಲು ಜಿಲ್ಲಾಡಳಿತ ಸಜ್ಜು

೩. ವಿದ್ಯಾರ್ಥಿಗಳನ್ನು ಕೌಶಲ್ಯಯುತವಾಗಿ ಸಜ್ಜುಗೊಳಿಸಲು ಪದವಿ ಹಂತದಲ್ಲಿ ಕ್ರಮ - ಸಚಿವ ಡಾ. ಎಂ.ಸಿ. ಸುಧಾಕರ್

೪. ಗುಡುಗು ಸಿಡಿಲಿನ ಮುನ್ಸೂಚನೆ ಬಗ್ಗೆ ಕರ್ನಾಟಕ ರಾಜ್ಯ ನೈಸರ್ಗಿಕ ವಿಕೋಪ ಮೇಲ್ವಿಚಾರಣಾ ಕೇಂದ್ರದ ಆಪ್‌ನಲ್ಲಿ ಮಾಹಿತಿ

<><*<><>*><>

ಜನ ಸಾಮಾನ್ಯರಿಗೆ ಅನುಕೂಲವಾಗುವಂತೆ ಕಂದಾಯ ಇಲಾಖೆ ಅಧಿಕಾರಿಗಳು ಕಾರ್ಯ ನಿರ್ವಹಿಸಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಕರೆ ನೀಡಿದ್ದಾರೆ. ಕಂದಾಯ ಇಲಾಖೆಯಲ್ಲಿ ನೂತನವಾಗಿ ಆಯ್ಕೆಯಾಗಿರುವ ೧ ಸಾವಿರ ಗ್ರಾಮ ಆಡಳಿತ ಅಧಿಕಾರಿಗಳಿಗೆ ನೇಮಕಾತಿ ಪತ್ರ ವಿತರಿಸಿ ಮಾತನಾಡಿದ ಅವರು, ಕಂದಾಯ ಇಲಾಖೆ ಜವಾಬ್ದಾರಿಯುತವಾದ ಇಲಾಖೆಯಾಗಿದ್ದು, ಜನರ ಕೆಲಸ ದೇವರ ಕೆಲಸ ಎಂಬಂತೆ ಕಾರ್ಯ ನಿರ್ವಹಿಸಬೇಕು ಎಂದು ಭರ್ತಿಯಾದ ಅಧಿಕಾರಿಗಳಿಗೆ ಕಿವಿ ಮಾತು ಹೇಳಿದರು. ರಾಜ್ಯದ ಇತಿಹಾಸದಲ್ಲೇ ಇದೇ ಮೊದಲ ಬಾರಿಗೆ ಒಂದು ಸಾವಿರ ಗ್ರಾಮ ಆಡಳಿತಾಧಿಕಾರಿಗಳ ನೇಮಕಕ್ಕೆ ಒಂದೇ ಹಂತದಲ್ಲಿ ಆದೇಶ ಹೊರಡಿಸಲಾಗಿದೆ ಎಂದು ಸಚಿವ ಕೃಷ್ಣ ಬೈರೇಗೌಡ ತಿಳಿಸಿದರು. ಒಂದು ಸಾವಿರ ಅಧಿಕಾರಿಗಳನ್ನು ಪಾರದರ್ಶಕವಾಗಿ ನೇಮಕ ಮಾಡಲಾಗಿದೆ ಎಂದು ಹೇಳಲು ಸಂತಸವಾಗುತ್ತಿದೆ ಎಂದು ಅವರು ಹೇಳಿದರು.

<><*<><>*><>

ಸರ್ಕಾರಿ ನೌಕರರು ತಮಗೆ ಒದಗಿದ ಅವಕಾಶವನ್ನು ಸದ್ಬಳಕೆ ಮಾಡಿಕೊಳ್ಳುವ ಮೂಲಕ ಸಾರ್ವಜನಿಕರ ಸೇವೆ ಮಾಡಬೇಕು ಎಂದು ಗದಗ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ್ ತಿಳಿಸಿದ್ದಾರೆ. ಗದಗದಲ್ಲಿ ನಡೆದ ಸರ್ಕಾರಿ ನೌಕರರ ದಿನಾಚರಣೆ ಹಾಗೂ ಸರ್ವೋತ್ತಮ ಸೇವಾ ಪ್ರಶಸ್ತಿ ಪ್ರಧಾನ ಸಮಾರಂಭ ಉದ್ಘಾಟಿಸಿ ಮಾತನಾಡಿದ ಅವರು, ಜಿಲ್ಲೆಯಲ್ಲಿ ಅಭಿವೃದ್ಧಿ ವಿಚಾರದಲ್ಲಿ ಎಲ್ಲರ ಸಹಕಾರ ಅಗತ್ಯ ಎಂದು ಹೇಳಿದ್ದಾರೆ. ಇದೇ ಸಂದರ್ಭದಲ್ಲಿ ರಾಜ್ಯ ಸರ್ಕಾರಿ ನೌಕರರಿಗೆ ಸರ್ವೋತ್ತಮ ಸೇವಾ ಪ್ರಶಸ್ತಿ ಹಾಗೂ ಪಿಯುಸಿ ಯಲ್ಲಿ ಉತ್ತಮ ಸಾಧನೆ ಗೈದ ವಿದ್ಯಾರ್ಥಿಗಳಿಗೆ ಸನ್ಮಾನ ಕಾರ್ಯಕ್ರಮ ನಡೆಯಿತು.

<><*<><>*><>

ನಾಳೆ ಬಸವ ಜಯಂತಿ ಮತ್ತು ಅಕ್ಷಯ ತೃತೀಯ ಮಂಗಳ ದಿನವಾಗಿದ್ದು, ಬಾಲ್ಯವಿವಾಹಗಳು ಹೆಚ್ಚು ನಡೆಯುವ ಸಾಧ್ಯತೆ ಇರುವುದರಿಂದ ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಅಧಿಕಾರಿಗಳು, ಸಾರ್ವಜನಿಕರು ಜಾಗೃತರಾಗಿರಬೇಕೆಂದು ಜಿಲ್ಲಾಧಿಕಾರಿ ಎ.ಬಿ.ಬಸವರಾಜು ಸೂಚನೆ ನೀಡಿದ್ದಾರೆ. ಬಾಲ್ಯವಿವಾಹ ನಿಷೇಧ ಅಧಿನಿಯಮ-೨೦೧೬ ಪ್ರಕಾರ ಬಾಲ್ಯವಿವಾಹಗಳನ್ನು ಏರ್ಪಡಿಸುವ ಪೋಷಕರು ಅಥವಾ ಪಾಲಕರು, ಜೈಲು ಶಿಕ್ಷೆ ಹಾಗೂ ದಂಡ ನೀಡುವ ಶಿಕ್ಷೆಗೆ ಒಳಪಡುತ್ತಾರೆ. ಬಾಲ್ಯವಿವಾಹ ನಿಷೇಧಾಧಿಕಾರಿಗಳು ತಮ್ಮ ಕಾರ್ಯವ್ಯಾಪ್ತಿಗೆ ಬರುವ ಧಾರ್ಮಿಕ ಸ್ಥಳಗಳಲ್ಲಿ ಮತ್ತು ಕಲ್ಯಾಣ ಮಂಟಪಗಳಲ್ಲಿ ಸಾಮೂಹಿಕ ಅಥವಾ ವೈಯಕ್ತಿಕ ವಿವಾಹದಲ್ಲಿ ಯಾವುದೇ ಬಾಲ್ಯವಿವಾಹಗಳು ಜರುಗದಂತೆ ಕ್ರಮವಹಿಸಬೇಕು ಎಂದು ನಿರ್ದೇಶನ ನೀಡಿದ್ದಾರೆ. ವಿಜಯಪುರ ಜಿಲ್ಲೆಯನ್ನು ಬಾಲ್ಯವಿವಾಹ ಮುಕ್ತ ಜಿಲ್ಲೆಯನ್ನಾಗಿಸಲು ಕಟ್ಟುನಿಟ್ಟಿನ ಕ್ರಮ ವಹಿಸುವಂತೆ ಜಿಲ್ಲಾಧಿಕಾರಿ ಟಿ.ಭೂಬಾಲನ್ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

<><*<><>*><>

ವಿದ್ಯಾರ್ಥಿಗಳನ್ನು ಕೌಶಲ್ಯಸಹಿತವಾಗಿ ಸಜ್ಜುಗೊಳಿಸಲು ಪದವಿ ಹಂತದಲ್ಲೇ ಕ್ರಮ ಕೈಗೊಳ್ಳುವ ಮೂಲಕ ಉನ್ನತ ಶಿಕ್ಷಣ ಇಲಾಖೆಯಲ್ಲಿ ಹಲವು ಬದಲಾವಣೆ ತರಲಾಗಿದೆ ಎಂದು ಉನ್ನತ ಶಿಕ್ಷಣ ಸಚಿವ ಡಾ.ಎಂ.ಸಿ.ಸುಧಾಕರ್ ತಿಳಿಸಿದ್ದಾರೆ. ಚಿಕ್ಕಬಳ್ಳಾಪುರ ಜಿಲ್ಲೆ ಶಿಡ್ಲಘಟ್ಟ ನಗರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ವಿವಿಧ ಕಾಮಗಾರಿಗಳ ಶಂಕುಸ್ಥಾಪನೆ ನೆರವೇರಿಸಿ ಮಾತನಾಡಿದ ಅವರು, ಕಳೆದ ಎರಡು ವರ್ಷಗಳಲ್ಲಿ ಉನ್ನತ ಶಿಕ್ಷಣ ಇಲಾಖೆಯಲ್ಲಿ ಹಲವಾರು ಬದಲಾವಣೆಗಳನ್ನು ತರುವ ಪ್ರಯತ್ನ ಮಾಡಲಾಗಿದೆ ಎಂದು ಹೇಳಿದ್ದಾರೆ. ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಕಳೆದ ೨ ವರ್ಷಗಳಲ್ಲಿ ೧೨೪೨ ಸಹಾಯಕ ಪ್ರಾಧ್ಯಾಪಕರ ಹುದ್ದೆಗಳಿಗೆ ನೇಮಕಾತಿ ಪತ್ರ ನೀಡಲಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ.

<><*<><>*><>

ವಾಯುಪಡೆಯ ಕಮಾಂಡ್ ಆಸ್ಪತ್ರೆ ಸಂಕೀರ್ಣಕ್ಕೆ ಭಾರತೀಯ ವಾಯುಪಡೆಯ ಕಮಾಂಡಿಂಗ್ ಇನ್ ಚೀಫ್ ಏರ್ ಮಾರ್ಷಲ್ ನಾಗೇಶ್ ಕಪೂರ್ ಬೆಂಗಳೂರಿನಲ್ಲಿ ಶಂಕು ಸ್ಥಾಪನೆ ನೆರವೇರಿಸಿದರು. ಈ ನೂತನ ಆಸ್ಪತ್ರೆ ಅತ್ಯಾಧುನಿಕ ೮೦೦ ಹಾಸಿಗೆಗಳ ಸೌಲಭ್ಯವನ್ನು ಹೊಂದಲಿದೆ. ೧೬ ಆಧುನಿಕ ಅಪರೇಷನ್ ಶಸ್ತ್ರ ಚಿಕಿತ್ಸಾ ಕೊಠಡಿಗಳು, ತುರ್ತು ಚಿಕಿತ್ಸಾ ಕೊಠಡಿಗಳು, ಥಿಯೇಟರ್‌ಗಳು, ಹಾಗೂ ಆಧುನಿಕ ಪ್ರಯೋಗಾಲಯ ಒಳಗೊಳ್ಳಲಿದೆ.

<><*<><>*><>

ಪ್ರಧಾನಿ ನರೇಂದ್ರ ಮೋದಿ ಅವರ ವ್ಯಕ್ತಿತ್ವಕ್ಕೆ ಕಾಂಗ್ರೆಸ್ ಅವಮಾನ ಮಾಡಿದೆ ಎಂದು ಪ್ರತಿಪಕ್ಷ ನಾಯಕ ಅಶೋಕ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಚಿವ ಆರ್.ಬಿ. ತಿಮ್ಮಾಪುರ ಹೇಳಿಕೆಯನ್ನು ಖಂಡಿಸಿದ್ದಾರೆ. ಇದೇ ವೇಳೆ ಪಾಕಿಸ್ತಾನ ಪರವಾಗಿ ಹೇಳಿಕೆ ನೀಡುವವರು ದೇಶದ್ರೋಹಿಗಳು ಎಂದು ತಿಳಿಸಿದ್ದಾರೆ.

<><*<><>*><>

ಸಾರ್ವಜನಿಕರು ಕರ್ನಾಟಕ ರಾಜ್ಯ ನೈಸರ್ಗಿಕ ವಿಕೋಪ ಮೇಲ್ವಿಚಾರಣಾ ಕೇಂದ್ರದ ವರುಣ ಮಿತ್ರ ಸಹಾಯವಾಣಿ ೯೨೪೩೩-೪೫೪೩೩ಯನ್ನು ಸಂಪರ್ಕಿಸಿ ಹವಾಮಾನ ಮಾಹಿತಿ ಪಡೆದುಕೊಳ್ಳಬಹುದಾಗಿದೆ ಎಂದು ರಾಯಚೂರು ಜಿಲ್ಲಾಧಿಕಾರಿ ನಿತೀಶ್ ಕೆ. ತಿಳಿಸಿದ್ದಾರೆ. ಗುಡುಗು ಸಿಡಿಲಿನ ಮುನ್ನೆಚ್ಚರಿಕೆಗಳನ್ನು ಕರ್ನಾಟಕ ರಾಜ್ಯ ನೈಸರ್ಗಿಕ ವಿಕೋಪ ಮೇಲ್ವಿಚಾರಣಾ ಕೇಂದ್ರದ ಅಭಿವೃದ್ಧಿಪಡಿಸಿರುವ ಸಿಡಿಲು ಆಪ್‌ನಲ್ಲಿ ಪಡೆಯಬಹುದು. ಅಥವಾ ಎನ್‌ಡಿಎಂಎ ಅಭಿವೃದ್ಧಿಪಡಿಸಿರುವ ದಾಮಿನಿ ಆಪ್ ಅಳವಡಿಸಿಕೊಳ್ಳಬಹುದು. ಇದರಲ್ಲಿ ಸಿಡಿಲು ಯಾವ ಪ್ರದೇಶದಲ್ಲಿ ಬರುವ ಸಾಧ್ಯತೆಯಿದೆ ಎಂಬುದರ ಕುರಿತು ೩೦ ನಿಮಿಷಗಳ ಮೊದಲೇ ಮುನ್ಸೂಚನೆ ಪಡೆಯಬಹುದು. ಸಿಡಿಲಿನ ಅಪಾಯದಿಂದ ತಪ್ಪಿಸಿಕೊಳ್ಳಲು ಅಗತ್ಯ ಸಲಹೆ, ಸೂಚನೆಗಳನ್ನು ಆಪ್‌ನಲ್ಲಿ ನೀಡಲಾಗಿದೆ ಎಂದು ಮಾಹಿತಿ ನೀಡಿದ್ದಾರೆ.

<><*<><>*><>

ಮಹಿಳೆಯರಿಗೆ ನ್ಯಾಯ ಕೊಡಿಸುವುದು ಮಹಿಳಾ ಆಯೋಗದ ಕರ್ತವ್ಯವಾಗಿದೆ ಎಂದು ರಾಷ್ಟ್ರೀಯ ಮಹಿಳಾ ಆಯೋಗದ ಸದಸ್ಯೆ ಡಾ. ಅರ್ಚನಾ ಮಜುಂದಾರ್ ತಿಳಿಸಿದ್ದಾರೆ. ಮೈಸೂರು ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ನಡೆದ ಸಭೆಯಲ್ಲಿ ಮಾತನಾಡಿದ ಅವರು, ರಾಷ್ಟೀಯ ಮಹಿಳಾ ಆಯೋಗದಲ್ಲಿ ೪೦ ಸಾವಿರ ಪ್ರಕರಣಗಳು ಬಾಕಿಯಿದ್ದು, ಆಯೋಗವು ಮಹಿಳೆಯರ ಪರವಾದ ಧ್ವನಿಯಾಗಿ ಕಾರ್ಯ ನಿರ್ವಹಿಸಲಿದೆ ಎಂದು ಹೇಳಿದ್ದಾರೆ. ರಾಷ್ಟ್ರೀಯ ಮಹಿಳಾ ಆಯೋಗದಲ್ಲಿ

ದಾಖಲಾಗಿರುವ ಹಲವು ಪ್ರಕರಣಗಳ ಕುರಿತು ಮಾಹಿತಿ ಪಡೆದು ಸೂಕ್ತ ರೀತಿಯಲ್ಲಿ ತನಿಖೆ ನಡೆಸಿ ನ್ಯಾಯ ಕೊಡಿಸುವಂತೆ ಸಂಬಂಧಿಸಿದ ಪೊಲೀಸ್ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಲಕ್ಷ್ಮೀಕಾಂತ್ ರೆಡ್ಡಿ ಸೂಚನೆ ನೀಡಿದ್ದಾರೆ.

<><*<><>*><>

ಪರಿಶಿಷ್ಟ ಜಾತಿ ಒಳ ಮೀಸಲಾತಿ ಜಾರಿ ಸಂಬಂಧ ಮೇ ೦೫ ರಿಂದ ಪರಿಶಿಷ್ಟ ಜಾತಿ ಕುಟುಂಬಗಳ ಸಮೀಕ್ಷೆ ನಡೆಸಲು ಸರ್ಕಾರ ನಿರ್ಧರಿಸಿದೆ. ಸಮೀಕ್ಷೆಯು ಮೂರು ಹಂತಗಳಲ್ಲಿ ನಡೆಯಲಿದೆ ಎಂದು ಚಿತ್ರದುರ್ಗ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ತಿಳಿಸಿದ್ದಾರೆ. ಮೊದಲ ಹಂತದ ಸಮೀಕ್ಷೆ ಮೇ ೫ ರಿಂದ ೧೭ ರವರೆಗೆ ಮನೆ-ಮನೆ ಭೇಟಿ ನೀಡುವ ಮೂಲಕ ನಡೆಯಲಿದೆ.  ಎರಡನೇ ಹಂತದಲ್ಲಿ ಮೇ ೧೯ ರಿಂದ ೨೧ ರವರೆಗೆ ಸಮೀಕ್ಷೆ ಬ್ಲಾಕ್‌ಗಳಲ್ಲಿ ವಿಶೇಷ ಶಿಬಿರಗಳನ್ನು ಕೈಗೊಂಡು, ಮನೆ ಭೇಟಿಯಲ್ಲಿ ಬಿಟ್ಟುಹೋದ ಪರಿಶಿಷ್ಟ ಜಾತಿ ಕುಟುಂಬಗಳ ಮಾಹಿತಿಯನ್ನು ಸಂಗ್ರಹಿಸಲಿದೆ. ಮೂರನೇ ಹಂತದಲ್ಲಿ ಮೇ ೧೯ ರಿಂದ ೨೧ ರವರೆಗೆ ಸ್ವಯಂ ಸಮೀಕ್ಷೆಗೆ ಮಾಹಿತಿ ಒದಗಿಸಬಹುದಾಗಿದೆ.

<><*<><>*><>

ದೇಶಾದ್ಯಂತ ಮೇ ೪ರಂದು ನೀಟ್ ಯುಜಿ ಪರೀಕ್ಷೆ ನಡೆಯಲಿದೆ. ಮೈಸೂರು ಜಿಲ್ಲೆಯ ೨೦ ಪರೀಕ್ಷಾ ಕೇಂದ್ರಗಳಲ್ಲಿ 'ನೀಟ್' ಪರೀಕ್ಷೆ ನಡೆಯಲಿದ್ದು, ಯಾವುದೇ ಲೋಪ ಆಗದಂತೆ ಸುಗಮವಾಗಿ ಪರೀಕ್ಷೆ ನಡೆಸಲು ಅಗತ್ಯ ಸಿದ್ಧತೆ ಮಾಡಿಕೊಳ್ಳಬೇಕು' ಎಂದು ಜಿಲ್ಲಾಧಿಕಾರಿ ಜಿ. ಲಕ್ಷ್ಮೀ ಕಾಂತ ರೆಡ್ಡಿ ತಿಳಿಸಿದ್ದಾರೆ. ಮೈಸೂರು ಜಿಲ್ಲೆಯಲ್ಲಿ ೨೦ ಪರೀಕ್ಷಾ ಕೇಂದ್ರಗಳಲ್ಲಿ ೭ ಸಾವಿರದ ೭೦೯ ವಿದ್ಯಾರ್ಥಿಗಳು ನೀಟ್ ಪರೀಕ್ಷೆಗೆ ಹಾಜರಾಗಲಿದ್ದು,  ನೀಟ್ ಪರೀಕ್ಷೆ ಸುಗಮವಾಗಿ, ನ್ಯಾಯಯುತ ನಡೆಯಲು ಅಗತ್ಯ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಸೂಚಿಸಿದ್ದಾರೆ.

<><*<><>*><>

ಸರ್ಕಾರವು ಅಲೆಮಾರಿ ಜನಾಂಗಗಳನ್ನು ಮುಖ್ಯವಾಹಿನಿಗೆ ಕರೆತರಲು ಅನೇಕ ಸೌಲಭ್ಯಗಳನ್ನು ಜಾರಿಗೊಳಿಸಿದೆ ಎಂದು ಕರ್ನಾಟಕ ಪರಿಶಿಷ್ಟ ಜಾತಿ ಮತ್ತು ಪಂಗಡಗಳ ಅಲೆಮಾರಿ ಅಭಿವೃದ್ಧಿ ನಿಗಮ ಅಧ್ಯಕ್ಷೆ ಪಲ್ಲವಿ ತಿಳಿಸಿದ್ದಾರೆ.  ಮಂಡ್ಯ ಜಿಲ್ಲೆಯ ಕೆ.ಆರ್.ಪೇಟೆಯಲ್ಲಿ ಪರಿಶಿಷ್ಟ ಜಾತಿಯ ಸಮಸ್ಯೆಗಳನ್ನು ಆಲಿಸಿದ ಅವರು, ಆಧಾರ್ ಕಾರ್ಡ್, ಜಾತಿ ಪ್ರಮಾಣ ಪತ್ರ ಮತ್ತು ಪಡಿತರ ಚೀಟಿಗಳನ್ನು ಇಲಾಖೆಗೆ ಸಲ್ಲಿಸಿ  ಸೌಲಭ್ಯಗಳನ್ನು ಪಡೆಯಿರಿ ಎಂದು ಹೇಳಿದರು.  ಶಿಕ್ಷಣ ಅಭಿವೃದ್ಧಿಯ ಮುಖ್ಯ ಅಸ್ತ್ರವಾಗಿದ್ದು, ಉಚಿತ ಶಿಕ್ಷಣ, ಬಿಸಿ ಊಟ ಸೇರಿದಂತೆ  ಸರ್ಕಾರ ಹಲವಾರು ಯೋಜನೆಗಳನ್ನು ರೂಪಿಸಿದೆ. ಪ್ರತಿಯೊಬ್ಬರು  ಮಕ್ಕಳಿಗೆ ಶಿಕ್ಷಣ ಕೊಡಿಸಿ  ಎಂದು ಪೋಷಕರಿಗೆ ಸಲಹೆ ನೀಡಿದರು.

<><*<><>*><>

ಇನ್ನು ಹವಾವರ್ತಮಾನ,

ರಾಜ್ಯದ ಕೆಲವೆಡೆ ಮಳೆಯಾಗಿದೆ. ನಾಪೊಕ್ಲು ೩, ಚಾಮರಾಜನಗರ ೨, ಕಳಸ, ಕುಶಾಲನಗರ, ಶೃಂಗೇರಿ, ಮಣಿ, ಕಾರ್ಕಳದಲ್ಲಿ ತಲಾ ೧ ಸೆಂಟಿ ಮೀಟರ್ ಮಳೆಯಾಗಿದೆ. ಕಳೆದ ೨೪ ಗಂಟೆಗಳಲ್ಲಿ ರಾಜ್ಯದ ಒಳನಾಡಿನ ಬೀದರ್ ಮತ್ತು ಚಿತ್ರದುರ್ಗದಲ್ಲಿ ಜಿಲ್ಲೆಗಳಲ್ಲಿ ಗರಿಷ್ಠ ತಾಪಮಾನದಲ್ಲಿ ಗಮನಾರ್ಹ ಇಳಿಕೆ ಹಾಗೂ ವಿಜಯಪುರ, ಕಲಬುರಗಿ ಮತ್ತು ಆಗುಂಬೆಯಲ್ಲಿ ಗರಿಷ್ಠ ತಾಪಮಾನ ಏರಿಕೆ ಕಂಡುಬಂದಿದೆ. ರಾಜ್ಯದ ಅತಿಹೆಚ್ಚು ಉಷ್ಣಾಂಶ ೪೦ ಡಿಗ್ರಿ ಸೆಲ್ಸಿಯೆಸ್ ಬೀದರ್‌ನಲ್ಲಿ ದಾಖಲಾಗಿದೆ. ಮುಂದಿನ ೨೪ ಗಂಟೆಗಳಲ್ಲಿ ಬೆಂಗಳೂರು ಸುತ್ತಮುತ್ತ ಮೋಡಕವಿದ ವಾತಾವರಣ. ಗರಿಷ್ಠ ೩೩, ಕನಿಷ್ಠ ೨೩ ಡಿಗ್ರಿ ಸೆಲ್ಸಿಯೆಸ್ ತಾಪಮಾನ ಸಂಭವ.

<><*<><>*><>

ಸಂಕ್ಷಿಪ್ತ ಸುದ್ದಿಗಳು...

೧. ಕಾಲುಬಾಯಿ ರೋಗವನ್ನು ನಿರ್ಮೂಲನೆ ಮಾಡಲು ರೈತರು ತಪ್ಪದೇ ತಮ್ಮ ರಾಸುಗಳಿಗೆ ಲಸಿಕೆ ಹಾಕಿಸಬೇಕೆಂದು ತುಮಕೂರು ಹಾಲು ಒಕ್ಕೂಟದ ನಿರ್ದೇಶಕ ಹೆಚ್.ಎ.ನಂಜೇಗೌಡ ಮನವಿ ಮಾಡಿದ್ದಾರೆ.

೨. ವಿಜಯನಗರ ಜಿಲ್ಲೆಯ ಹೂವಿನಹಡಗಲಿ ತಾಲೂಕಿನ ಲಿಂಗನಾಯಕನಹಳ್ಳಿ ತಾಂಡಾದಲ್ಲಿ ಪೂರ್ವಜರ ಕಾಲದಿಂದಲೂ ಉಳುಮೆ ಮಾಡುತ್ತಿರುವ ಅರಣ್ಯ ಭೂಮಿಯನ್ನು ಒತ್ತುವರಿ ಮಾಡಿಕೊಂಡಿದ್ದೇವೆ ಎಂದು ಅರಣ್ಯ ಇಲಾಖೆಯಿಂದ ಪದೇ ಪದೇ ನೋಟಿಸ್ ಕೊಡುತ್ತಿದ್ದು, ಕೂಡಲೇ ಅಗತ್ಯ ಕ್ರಮ ಕೈಗೊಂಡು ರೈತರಿಗೆ ನ್ಯಾಯ ಒದಗಿಸಬೇಕೆಂದು ತಾಂಡಾ ನಿವಾಸಿಗಳು ಜಿಲ್ಲಾಧಿಕಾರಿ ಎಂ.ಎಸ್.ದಿವಾಕರ ಅವರಿಗೆ ಇಂದು ಮನವಿ ಸಲ್ಲಿಸಿದರು.

<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>